ಗ್ರಂಥಾಲಯ ಕಟ್ಟಡ ನಿರ್ಮಾಣ

2556(488); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಚಿಂಚೋಳಿ ಪಟ್ಟಣದಲ್ಲಿ ಕೇಂದ್ರ ಗ್ರಂಥಾಲಯಕ್ಕೆ ಸ್ವಂತ ಕಟ್ಟಡ ವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ

ಪ್ರಸ್ತುತ ಚಿಂಚೋಳಿ ಪಟ್ಟಣದಲ್ಲಿ ಶಾಖಾ ಗ್ರಂಥಾಲಯ ಕಾರ್ಯನಿರ್ವಹಿಸುತ್ತಿದ್ದು, ಹಾಲಿ ಇರುವ ಗ್ರಂಥಾಲಯ ಕಟ್ಟಡ ಶಿಥಿಲಗೊಂಡಿರುವುದರಿಂದ ಇದನ್ನು ನೆಲಸಮಗೊಳಿಸಿ ಹೊಸ ಗ್ರಂಥಾಲಯ ಕಟ್ಟಡ ನಿರ್ಮಿಸುವ ಪ್ರಸ್ತಾವನೆ ಬಗ್ಗೆ ಪರಿಶೀಲಿಸಲಾಗುವುದು.

ಮಾಹಿತಿ ಸಿಂಧು (ICT Phase-2 ಯೋಜನೆ)

2558(1853); ಶ್ರೀ ಗೋಪಾಲ ಪೂಜಾರಿ ಕೆ. (ಬೈಂದೂರು)

ಅ) ಮಾಹಿತಿಸಿಂಧು (ICT Phase-2) ಯೋಜನೆಯಲ್ಲಿ ಶಾಲಾ ಕಾಲೇಜುಗಳಿಗೆ ಪೂರೈಸಲಾದ ಗಣಕ ಯಂತ್ರಗಳು ದುಸ್ಥಿತಿಯಲ್ಲಿದ್ದು, ತರಗತಿಗಳು ನಡೆಯುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಸಂಬಂಧವಾಗಿ ಬಾಕಿ ಇರುವ ವಿದ್ಯುತ್ ಬಿಲ್ ಪಾವತಿಸುವುದಕ್ಕೆ ಏನು ವ್ಯವಸ್ಥೆ ಮಾಡಲಾಗುವುದು;

ಇ) ಈ ಯೋಜನೆ ಪ್ರಸ್ತುತ ಜಾರಿಯಲ್ಲಿರುವುದಿಲ್ಲ (ಮಾಹಿತಿ ನೀಡುವುದು)?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬಂದಿದೆ

ಆ) ಮೆ॥ ಎಡುಕಾಂ ಸಂಸ್ಥೆ ವತಿಯಿಂದ ಐಸಿಟಿ ಫೇಸ್–2 ಯೋಜನೆಯನ್ನು ಜಾರಿ ಮಾಡಲಾಗಿದೆ. ಸದರಿ ಸಂಸ್ಥೆಯವರಿಗೆ ಅನುದಾನದ ಬಾಕಿ ಬಿಡುಗಡೆ ಮಾಡಬೇಕಾಗಿದ್ದು, ಈ ಅನುದಾನದಲ್ಲಿ ಶಾಲೆಗಳಲ್ಲಿ ವಿದ್ಯುಚ್ಛಕ್ತಿ ಬಿಲ್ಲು ಬಾಕಿ ಇರುವ ಬಗ್ಗೆ ಬಾಹ್ಯಮೂಲ ಸಂಸ್ಥೆಯಿಂದ ಪರಿಶೀಲಿಸುತ್ತಿರುವ ಮೆ.ನಿಸಾಕಿ ಸಂಸ್ಥೆ ಹಾಗೂ ಡಯಟ್‌ಗಳಿಂದ ವರದಿಗಳನ್ನು ಪಡೆದು, ಬಾಕಿ ಇದ್ದಲ್ಲಿ ಬಾಕಿ ಇರುವ ವಿದ್ಯುತ್ ಬಿಲ್ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಐಸಿಟಿ ಫೇಸ್–2 ಯೋಜನೆಯು ಪ್ರೌಢ ಶಾಲೆಗಳಲ್ಲಿ 30 ಸೆಪ್ಟಂಬರ್ 2013 ರಿಂದ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ 30.04.2014ಕ್ಕೆ ಅಂತ್ಯಗೊಂಡಿದೆ.

ಮದ್ಯ ಮಾರಾಟಕ್ಕೆ ಗುರಿ ನಿಗದಿ

2560(2734); ಶ್ರೀ ಗೋಪಾಲ ಪೂಜಾರಿ (ಬೈಂದೂರು)

ಅ) ಅಬಕಾರಿ ಇಲಾಖೆಯಲ್ಲಿ ಮದ್ಯ ಮಾರಾಟ ಮಾಡುವುದಕ್ಕೆ ಗುರಿ ನಿಗದಿಪಡಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಯಾವ ಮಾನದಂಡಗಳ ಆಧಾರದಲ್ಲಿ ಗುರಿ ನಿಗದಿಪಡಿಸಲಾಗಿದೆ;

ಇ) ಇದರಿಂದಾಗಿ ಕುಡಿತಕ್ಕೆ ಪ್ರೋತ್ಸಾಹಿಸಿ ಕುಡಿಯುವವರ ಸಂಖ್ಯೆಯನ್ನು ಸರ್ಕಾರ ಹೆಚ್ಚಳ ಮಾಡಿದಂತಾಗುವುದಿಲ್ಲವೇ?

ಶ್ರೀ ಲಕ್ಷ್ಮಣರಾವ್ ಜಾರಕಿಹೊಳಿ (ಮಾನ್ಯ ಅಬಕಾರಿ ಸಚಿವರು)

ಅ) ಹೌದು.